ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 17–11–2021**

# ಪತ್ರಿಕಾ ಪ್ರಕಟಣೆ

**PRESS RELEASE**

## ಹೊಸ ಡಿಜಿಟಲ್ ತಂತ್ರಜ್ಞಾನ ಹಾಗೂ ಆವಿಷ್ಕಾರಗಳಿಂದ ದೇಶದ ಅಭಿವೃದ್ಧಿ ಸಾಧ್ಯ–ಎಂ. ವೆಂಕಯ್ಯನಾಯ್ಡು

ಬೆಂಗಳೂರು, ನವೆಂಬರ್ 17 (ಕರ್ನಾಟಕ ವಾರ್ತೆ) :

ಹೊಸ ಡಿಜಿಟಲ್ ತಂತ್ರಜ್ಞಾನ ಹಾಗೂ ಆವಿಷ್ಕಾರಗಳನ್ನು ವಿನಿಮಯ ಮಾಡಿಕೊಂಡಾಗ ದೇಶದ ಬೆಳವಣಿಗೆಯಾಗುತ್ತದೆ ಇದರಿಂದ ಜೀವನಮಟ್ಟ ಸುಧಾರಿಸಿ ಜ್ಞಾನ ಆಧಾರಿತ ಸಮಾಜದ ಸೃಷ್ಠಿಯಾಗುತ್ತದೆ ಎಂದು ಭಾರತದ ಉಪರಾಷ್ಟ್ರಪತಿಗಳಾದ ಎಂ.ವೆಂಕಯ್ಯನಾಯ್ಡು ಅವರು ತಿಳಿಸಿದರು.

ಅವರು ಇಂದು ಖಾಸಗಿ ಹೋಟೆಲ್‌ನಲ್ಲಿ ಹಮ್ಮಿಕೊಳ್ಳಲಾದ 3 ದಿನಗಳ ಬೆಂಗಳೂರು ಟೆಕ್ ಸಮ್ಮಿಟ್–2021ರ 24ನೇ ಆವೃತ್ತಿಯನ್ನು ಉದ್ಘಾಟಿಸಿ ಮಾತನಾಡುತ್ತಾ, ಕೃಷಿ ಕ್ಷೇತ್ರದಲ್ಲಿ ಹೊಸ ಪ್ರಯೋಗಗಳು ನಡೆಯಬೇಕಿದೆ. ಇಂದು ದೇಶ ಜಾಗತಿಕ ತಾಪಮಾನ ಬದಲಾವಣೆ, ರೋಗರುಜಿನ ನಿರುದ್ಯೋಗ ಮುಂತಾದ ಸಮಸ್ಯೆಗಳನ್ನು ಎದುರಿಸುತ್ತಿದೆ. ಇವುಗಳ ನಿವಾರಣೆಗೆ ಡಿಜಿಟಲ್ ತಂತ್ರಜ್ಞಾನದ ಹೊಸ ಆವಿಷ್ಕಾರಗಳು, ಬೆಳವಣಿಗೆಗಳು ಹೆಚ್ಚು ಪೂರಕ. ಭಾರತದಲ್ಲಿ ಸಂಪನ್ಮೂಲಗಳಿಗೆ ಕೊರತೆಯಿಲ್ಲ. ಅದನ್ನು ತಾಂತ್ರಿಕ ರೀತಿಯನ್ನು ಬಳಸಿದರೆ ದೇಶ ಮುನ್ನಡೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಮಾನವನ ಸೃಷ್ಠಿಯೇ ಅದ್ಭುತಗಳಲ್ಲೊಂದು. ತನ್ನ ಬುದ್ಧಿ, ಜ್ಞಾನ, ಅಭಿವ್ಯಕ್ತಿಯಿಂದ ಏನನ್ನಾದರೂ ಸಾಧಿಸಲು ತಯಾರಿರುತ್ತಾನೆ. ನಾವು ಆಕಾಶಕ್ಕೂ ಎತ್ತರವಾಗಿ ಚಿಂತಿಸಬೇಕು. ಹೊಸ ತಾಂತ್ರಿಕ ಆವಿಷ್ಕಾರಗಳು, ಇದರ ಅಳವಡಿಕೆಯಿಂದ ಜ್ಞಾನಯುಕ್ತ ಸಮಾಜ ನಿರ್ಮಾಣ ಸಾಧ್ಯ. ಇಂದು ಹಮ್ಮಿಕೊಳ್ಳಲಾಗಿರುವ ಬೆಂಗಳೂರು ಟೆಕ್ ಸಮ್ಮಿಟ್ – 2021 ತಂತ್ರಜ್ಞಾನ ಮತ್ತು ಜಾಗತಿಕ ವ್ಯವಹಾರ ಬೆಳವಣಿಗೆಯನ್ನು ಅಭಿವ್ಯಕ್ತಿಗೊಳಿಸುತ್ತಿದೆ. ಬೇರೆ ದೇಶಗಳ ಜೊತೆಗೆ ತಂತ್ರಜ್ಞಾನ ವಿನಿಮಯದಿಂದ ದೇಶದ ಆರ್ಥಿಕ ಬೆಳವಣಿಗೆ ಸಹ ಸಾಧ್ಯ. ಕರ್ನಾಟಕ ಮಾಹಿತಿ ತಂತ್ರಜ್ಞಾನದಲ್ಲಿ ಮುಂಚೂಣಿಯಲ್ಲಿದ್ದು, ಇಂತಹ ಶೃಂಗಸಭೆಗಳು ರಾಜ್ಯವನ್ನು ಇನ್ನೂ ಎತ್ತರಕ್ಕೆ ಕರೆದೊಯ್ಯುತ್ತದೆ ಎಂದು ಸಂತಸ ವ್ಯಕ್ತಪಡಿಸಿದರು.

ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಮಾತನಾಡುತ್ತಾ, ಕರ್ನಾಟಕವು ಕೃಷಿ ಸೇರಿದಂತೆ ವಿಜ್ಞಾನ ತಂತ್ರಜ್ಞಾನದ ಸ್ಟಾರ್ಟ್‌ಅಪ್‌ಗಳಿಗೆ ಉತ್ತೇಜನ ನೀಡುತ್ತಿದೆ. ಭಾರತ ಸ್ವಾತಂತ್ರ್ಯದ ಅಮೃತ ಮಹೋತ್ಸವದ ಆಚರಣೆಯಲ್ಲಿದ್ದೇವೆ. ಶ್ರೇಷ್ಠ ಆತ್ಮನಿರ್ಭರ ಭಾರತವನ್ನು ಕಟ್ಟೋಣ. ಕೋವಿಡ್–19ರ ಕಷ್ಟದ ಕಾಲದಲ್ಲಿ ಬಳಲಿದ ದೇಶ ಈಗ ಸಹಜ ಸ್ಥಿತಿಯತ್ತ ಮರಳುತ್ತಿದೆ. ಈ ಸಮಾವೇಶ ದೇಶ ಹಾಗೂ ರಾಜ್ಯದ ಹೊಸ ತಂತ್ರಜ್ಞಾನದ ಬೆಳವಣಿಗೆ ನಾಂದಿ ಹಾಕಲಿ ಎಂದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಐಟಿ-ಬಿಟಿ, ಎಲೆಕ್ಟ್ರಾನಿಕ್ಸ್, ಉನ್ನತ ಶಿಕ್ಷಣ, ಕೌಶಲ್ಯಾಭಿವೃದ್ಧಿ ಸಚಿವರಾದ ಡಾ.ಸಿ.ಎನ್.ಅಶ್ವತ್ಥನಾರಾಯಣ ಅವರು ಆರೋಗ್ಯ, ವಿಜ್ಞಾನ, ಉದ್ದಿಮೆ, ಕೃಷಿ ಕ್ಷೇತ್ರದಲ್ಲಿ ಡಿಜಿಟಲ್ ಕ್ರಾಂತಿ ಏರ್ಪಟ್ಟಿದೆ. ಜೈವಿಕ ತಂತ್ರಜ್ಞಾನ, ಲಸಿಕೆಗಳ ಅಭಿವೃದ್ಧಿ ಇಂದು ಮೈಲಿಗಲ್ಲು ಸೃಷ್ಟಿಸಿವೆ. ಈ ಶೃಂಗಸಭೆ ಹಲವು ನಿರ್ಣಯಗಳಿಗೆ ದಾರಿ ಮಾಡಿ ಕೊಡಲಿದೆ ಎಂದರು.

ನವೆಂಬರ್ 17ರಿಂದ 19ರವರೆಗೆ ಹಮ್ಮಿಕೊಳ್ಳಲಾಗಿರುವ ಬೆಂಗಳೂರು ತಂತ್ರಜ್ಞಾನ ಶೃಂಗದ 24ನೇ ಸಮಾವೇಶದಲ್ಲಿ 30ಕ್ಕೂ ಹೆಚ್ಚು ದೇಶಗಳು ಭಾಗವಹಿಸುತ್ತಿವೆ. ಯುಎಇ, ಐರೋಪ್ಯ ಒಕ್ಕೂಟ, ವಿಯೆಟ್ನಾಂ ಮತ್ತು ದಕ್ಷಿಣ ಆಫ್ರಿಕಾ ಇದೇ ಮೊದಲ ಬಾರಿಗೆ ಪಾಲ್ಗೊಳ್ಳುತ್ತಿದ್ದು, ಇಸ್ರೇಲ್ ಪ್ರಧಾನಿ ನಫ್ತಾಲಿ ಬೆನೆಟ್ ಆಸ್ಟ್ರೇಲಿಯಾ ಪ್ರಧಾನಿ ಸ್ಕಾಟ್ ಮಾರಿಸನ್ ಶೃಂಗದಲ್ಲಿ ವರ್ಚುಯಲ್ ರೂಪದಲ್ಲಿ ಮಾತನಾಡಿ ಶುಭ ಹಾರೈಸಿದರು.

ಈ ಶೃಂಗದಲ್ಲಿ 300ಕ್ಕೂ ಹೆಚ್ಚು ಕಂಪನಿಗಳು 5 ಸಾವಿರಕ್ಕೂ ಹೆಚ್ಚು ನವೋದ್ಯಮಗಳು ಸಕ್ರಿಯವಾಗಿ ಭಾಗವಹಿಸಿವೆ ವಾಣಿಜ್ಯ ವಲಯದ 20 ಸಾವಿರಕ್ಕೂ ಹೆಚ್ಚು ಪ್ರತಿನಿಧಿಗಳು ಹಾಜರಾಗುತ್ತಿದ್ದು, ವರ್ಚುಯಲ್ ರೂಪದಲ್ಲಿ 5 ಲಕ್ಷಕ್ಕೂ ಹೆಚ್ಚು ಆಸಕ್ತರು ವೀಕ್ಷಿಸಲಿದ್ದಾರೆ.

'ಡ್ರೈವಿಂಗ್ ದಿ ನೆಕ್ಸ್ಟ್' ಘೋಷವಾಕ್ಯದಡಿ ನಡೆಯಲಿರುವ ಈ ಶೃಂಗದಲ್ಲಿ ಐಟಿ-ಬಿಟಿ, ಕೃಷಿ, ಆರೋಗ್ಯ, ಲಸಿಕೆ, ಸೈಬರ್ ಸೆಕ್ಯೂರಿಟಿ, ವೈದ್ಯಕೀಯ ಮತ್ತು ಆರ್ಥಿಕ ತಂತ್ರಜ್ಞಾನಕ್ಕೆ ಒತ್ತು ನೀಡಲಾಗುವುದು. ಕಾರ್ಯಕ್ರಮದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವ ಮುರುಗೇಶ ನಿರಾಣಿ ಕರ್ನಾಟಕ ಸರ್ಕಾರದ ಬಯೋಟೆಕ್ನಾಲಜಿ ವಿಷನ್ ಗ್ರೂಪ್ ಅಧ್ಯಕ್ಷರಾದ ಡಾ. ಕಿರಣ್ ಮಜುಂದಾರ್ ಶಾ, ಐಟಿ-ಬಿಟಿ ಎಲೆಕ್ಟ್ರಾನಿಕ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಮಣರೆಡ್ಡಿ ಹಾಗೂ ಗಣ್ಯರು ಉಪಸ್ಥಿತರಿದ್ದರು.

## ಮೇಧಾಶಕ್ತಿಯ ಸಮರ್ಥ ಬಳಕೆಗೆ ರಾಜ್ಯಕ್ಕೆ ಬನ್ನಿ: ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆಹ್ವಾನ

ಬೆಂಗಳೂರು, ನವೆಂಬರ್ 17, (ಕರ್ನಾಟಕ ವಾರ್ತೆ) :

ಮನುಷ್ಯನ ಮೇಧಾಶಕ್ತಿಯ ಸಮರ್ಥ ಬಳಕೆಗೆ ಪೂರಕ ವಾತಾವರಣ ಬೆಂಗಳೂರಿನಲ್ಲಿ, ಕರ್ನಾಟಕ ರಾಜ್ಯದಲ್ಲಿದೆ. ಆದ್ದರಿಂದ ರಾಜ್ಯದಲ್ಲಿ ನಾವಿನ್ಯತೆಯನ್ನು ಅನ್ವೇಷಿಸಿ, ಸಾಧನೆಯ ಉತ್ತುಂಗಕ್ಕೇರುವಂತೆ ತಂತ್ರಜ್ಞಾನ ಕ್ಷೇತ್ರದ ಭಾಗೀದಾರರಿಗೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಮುಕ್ತವಾಗಿ ಕರೆ ನೀಡಿದರು.

ಬೆಂಗಳೂರು ಟೆಕ್ ಸಮ್ಮಿಟ್ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ ಇಂದು ಪಾಲ್ಗೊಂಡು ಮಾತನಾಡಿದ ಮುಖ್ಯಮಂತ್ರಿಗಳು, ತಂತ್ರಜ್ಞಾನದಲ್ಲಿ ಕರ್ನಾಟಕ ಮುಂಚೂಣಿಯಲ್ಲಿರುವ ರಾಜ್ಯ. ರಾಜ್ಯದಲ್ಲಿ ತಂತ್ರಜ್ಞಾನಕ್ಕೆ ಸಂಬಂಧಿಸಿದ ಅನೇಕ ನಾಯಕರಿದ್ದಾರೆ. ಕಿರಣ್ ಮಜುಂದಾರ್ ಷಾ ಸೇರಿದಂತೆ ಎಲ್ಲ ಕ್ಷೇತ್ರಗಳಲ್ಲಿ ಸಾಧಕರು ಹಾಗೂ ಪ್ರತಿಭಾವಂತರಿದ್ದಾರೆ. ಅಂತರರಾಷ್ಟ್ರೀಯ ಖ್ಯಾತಿಯುಳ್ಳ 300 ಕ್ಕೂ ಹೆಚ್ಚು ಸಂಶೋಧನಾ ಮತ್ತು ಅಭಿವೃದ್ಧಿ ಸಂಸ್ಥೆಗಳಿವೆ. ಏರೋಸ್ಪೇಸ್, ರಕ್ಷಣಾ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಸೆಮಿಕಂಡಕ್ಟರ್, ನವೀಕರಿಸಬಹುದಾದ ಇಂಧನ, ಐ.ಟಿ.ಬಿ.ಟಿ, ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ರಾಜ್ಯ ಮೊದಲ ಸ್ಥಾನದಲ್ಲಿದೆ ಎಂದು ತಿಳಿಸಿದರು.

ಬೆಂಗಳೂರು ಟೆಕ್ ಸಮ್ಮಿಟ್ ಹಿಂದಿನಿಂದಲೂ ಯಶಸ್ವೀ ಸಮಾವೇಶವಾಗಿದ್ದು, ಈ ಬಾರಿಯ ಸಮಾವೇಶ ಇನ್ನಷ್ಟು ಫಲಪ್ರದವಾಗಬೇಕು. ತಂತ್ರಜ್ಞಾನದ ಕ್ಷೇತ್ರದ ಮುನ್ನಡೆಯಲ್ಲಿ, ತಂತ್ರಜ್ಞಾನವನ್ನು ಪ್ರತಿಯೊಬ್ಬರಿಗೂ ಹಾಗೂ ಸಂಪೂರ್ಣ ವ್ಯವಸ್ಥೆಗೆ ತಲುಪಿಸುವಲ್ಲಿ ಈ ಸಮಾವೇಶದಿಂದ ನಿಖರ ಹಾಗೂ ಜವಾಬ್ದಾರಿಯುತ ಕೊಡುಗೆ ದೊರೆಯುವುದು ಎಂಬ ಆಶಯವನ್ನು ಮುಖ್ಯಮಂತ್ರಿಗಳು ವ್ಯಕ್ತಪಡಿಸಿದರು.

ಬೆಂಗಳೂರಿನಲ್ಲಿ ಎಲ್ಲ ನಾವೀನ್ಯತೆದಾರರು ತಮ್ಮ ಬುದ್ಧಿಶಕ್ತಿಯನ್ನು ಪ್ರದರ್ಶಿಸಲು ಅಗತ್ಯವಿರುವ ವಾತಾವರಣವನ್ನು ಕರ್ನಾಟಕ ಹೊಂದಿದೆ. ವಲಯ ನಿರ್ದಿಷ್ಟ, ಪ್ರಗತಿಪರ ನೀತಿಗಳು, ವಿವಿಧ ಕ್ಷೇತ್ರಗಳ ಅಭ್ಯುದಯಕ್ಕೆ ದಾರ್ಶನಿಕ ತಂಡಗಳು, ವಿವಿಧ ಕ್ಷೇತ್ರಗಳ ನಾಯಕರ ಬೆಂಬಲ ಕರ್ನಾಟಕದಲ್ಲಿದೆ. ಇದರಿಂದಾಗಿ ಕರ್ನಾಟಕವು ಅತ್ಯಂತ ಶ್ರೀಮಂತ, ಉನ್ನತ ಚಿಂತನೆಯ ನಾಯಕತ್ವ, ಪ್ರತಿಭಾವಂತ ಮತ್ತು ಕುಶಲ ಮಾನವ ಸಂಪನ್ಮೂಲವನ್ನು ಹೊಂದಿದೆ ಎಂದು ಬೊಮ್ಮಾಯಿ ಅವರು ತಿಳಿಸಿದರು.

ಯಶಸ್ಸು ಸಾಧನೆಯ ಭಾಗವಾಗಿದ್ದು, ದೇಶ ಹಾಗೂ ವಿಶ್ವದ ಏಳಿಗೆಗೆ ಹಾಗೂ ಅಂತಿಮವಾಗಿ ಮನುಕುಲದ ಒಳಿತಿಗೆ ಕಾರಣವಾಗಬಲ್ಲದು. ಎಲ್ಲ ದೇಶಗಳ ಪ್ರತಿನಿಧಿಗಳು ಕರ್ನಾಟಕ ಮತ್ತು ಬೆಂಗಳೂರಿನಲ್ಲಿ ಹೂಡಿಕೆ ಮಾಡಿ, ಯಶಸ್ಸು ಗಳಿಸಿ ಸಾಧನೆ ಮಾಡಬೇಕು ಎಂದು ಮುಖ್ಯಮಂತ್ರಿಗಳು ಕರೆ ನೀಡಿದರು.

ನಾವೀನ್ಯತೆ ಸರಸ್ವತಿಯಂತೆ. ಬೆಂಗಳೂರು ಸರಸ್ವತಿಯ ವಾಹನ ಹಂಸದಂತೆ. ಹಂಸ ಭಾರಿ ಗಾತ್ರ, ತೂಕದ ಪಕ್ಷಿಯಾಗಿದ್ದರೂ, ಅತಿ ಎತ್ತರಕ್ಕೆ ಏರಬಲ್ಲ ಪಕ್ಷಿಯಾಗಿದೆ. ಅಂತೆಯೇ ಬೆಂಗಳಳೂರು ನಾವಿನ್ಯತೆಯನ್ನು ಅತಿ ಎತ್ತರಕ್ಕೆ ಕೊಂಡೊಯ್ಯಬಲ್ಲದು ಎಂದು ಮುಖ್ಯಮಂತ್ರಿಗಳು ಬಣ್ಣಿಸಿದರು.

ಪ್ರಧಾನಮಂತ್ರಿಗಳ ಆತ್ಮನಿರ್ಭರ್ ಕಾರ್ಯಕ್ರಮವನ್ನು ಅಕ್ಷರಶಃ ನಿಜ ಮಾಡಲು ಕರ್ನಾಟಕ ಸಿದ್ಧವಾಗಿದೆ ಎಂದರು. ಪ್ರಧಾನಿಯವರು ಸದಾ ದೇಶದ ಭವಿಷ್ಯದ ಕುರಿತು ಚಿಂತನೆ ನಡೆಸುತ್ತಿದ್ದು, ನವಕರ್ನಾಟಕದಿಂದ ನವಭಾರತ ನಿರ್ಮಾಣ ನಮ್ಮ ಧ್ಯೇಯವಾಗಿದೆ ಎಂದರು.

ವಿಶ್ವ ನಾಗರಿಕತೆಯ ಪರಿಕಲ್ಪನೆ ಇಂದಿನ ಮಂತ್ರ. ಮನುಷ್ಯನ ವಿಕಾಸಗೊಂಡಂತೆ, ತಂತ್ರಜ್ಞಾನವೂ ವಿಕಾಸಗೊಂಡಿವೆ.ಮಾನವನ ಮೆದುಳಿನ ಶಕ್ತಿಯಿಂದ ಮನುಕುಲದ ಚರಿತ್ರೆಯಲ್ಲಿ ಅದ್ಭುತ ನಾವೀನ್ಯತೆಯನ್ನು ಸಾಧಿಸಲಾಗಿದೆ. ತಾಂತ್ರಿಕತೆಯಲ್ಲಿನ ನಾವೀನ್ಯತೆಗಳನ್ನು ಸಂಸ್ಥೆಗಳಿಗಿಂತಲೂ ಕೆಲವೇ ವ್ಯಕ್ತಿಗಳು ಹೆಚ್ಚಾಗಿ ಮಾಡಿದ್ದಾರೆ. ಆದ್ದರಿಂದ ಮಾನವನ ಬುದ್ಧಿಶಕ್ತಿಯನ್ನು ಗುರುತಿಸಿ, ಗೌರವಿಸಿ, ಸನ್ಮಾನಿಸಬೇಕು ಎಂದರು. ಕಾರ್ಯಕ್ರಮವನ್ನು ಉಪರಾಷ್ಟ್ರಪತಿ ವೆಂಕಯ್ಯ ನಾಯ್ಡು ಅವರು ಉದ್ಘಾಟಿಸಿದರು.

ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕೈಗಾರಿಕಾ ಸಚಿವ ಮುರುಗೇಶ್ ನಿರಾಣಿ, ಐ.ಟಿ.ಬಿ.ಟಿ ಸಚಿವ ಡಾ: ಸಿ.ಎನ್.ಅಶ್ವತ್ಥ್ ನಾರಾಯಣ್ ಅವರು ಸೇರಿದಂತೆ ಗಣ್ಯರು, ಹಿರಿಯ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

## ಭಾಷಾ ಕೌಶಲ ಮತ್ತು ಕರಡು ತಿದ್ದುವಿಕೆ ಕಮ್ಮಟ ನಡೆಸಲು ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 17 (ಕರ್ನಾಟಕ ವಾರ್ತೆ) :

ಕರ್ನಾಟಕ ಸಾಹಿತ್ಯ ಅಕಾಡೆಮಿಯು 2021ರ ಡಿಸೆಂಬರ್ ತಿಂಗಳಿನಲ್ಲಿ ಗಿರಿಜನ ಉಪಯೋಜನೆಯಡಿ ರಾಜ್ಯಮಟ್ಟದ ಹತ್ತು ದಿನಗಳ "ಭಾಷಾ ಕೌಶಲ ಮತ್ತು ಕರಡು ತಿದ್ದುವಿಕೆ" ಕಮ್ಮಟವನ್ನು ನಡೆಸಲು ಉದ್ದೇಶಿಸಿದ್ದು, ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತಿಯಿರುವ 20 ರಿಂದ 45 ವರ್ಷ ವಯಸ್ಸುಳ್ಳ ರಾಜ್ಯದ ಎಲ್ಲ ಭಾಗದ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಮಾತ್ರ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು 30-11-2021 ಕೊನೆಯ ದಿನವಾಗಿರುತ್ತದೆ. ಆಸಕ್ತ ಅಭ್ಯರ್ಥಿಗಳು ಕರ್ನಾಟಕ ಸಾಹಿತ್ಯ ಅಕಾಡೆಮಿಯ ವೆಬ್‌ಸೈಟ್ http://karnatakasahithyaacademy.org ಮೂಲಕ ಅರ್ಜಿ ನಮೂನೆ ಹಾಗೂ ವಿವರಗಳನ್ನು ಪಡೆದುಕೊಳ್ಳಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಶೀಘ್ರಲಿಪಿಗಾರರ ಗ್ರೇಡ್–III ಹುದ್ದೆಗಳಿಗೆ ಅರ್ಜಿ ಆಹ್ವಾನ

ಬೆಂಗಳೂರು, ನವೆಂಬರ್ 17 (ಕರ್ನಾಟಕ ವಾರ್ತೆ) :

ವಿಜಯಪುರ ಜಿಲ್ಲೆಯ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಚೇರಿಯಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರ ಗ್ರೇಡ್–III 05 ಹುದ್ದೆಗಳಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ವಿಜಯಪುರ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/vijayapur-onlinerecruitment ಲಿಂಕ್ ಮೂಲಕ ಆನ್ ಲೈನ್‌ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದಾಗಿದ್ದು, ದಿನಾಂಕ: 30–11–2021 ಕೊನೆಯ ದಿನವಾಗಿರುತ್ತದೆ.

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದ ಒಳಗಾಗಿ ಪದವಿಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ನಡೆಸುವ ದ್ವಿತೀಯ ಪಿ.ಯು.ಸಿ ಅಥವಾ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು. ಕನ್ನಡ ಮತ್ತು ಆಂಗ್ಲ ಬೆರಳಚ್ಚು ಪ್ರೌಢ ದರ್ಜೆ ಹಾಗೂ ಕನ್ನಡ ಮತ್ತು ಆಂಗ್ಲ ಶೀಘ್ರಲಿಪಿ ಪ್ರೌಢ ದರ್ಜೆ ಪರೀಕ್ಷೆಯಲ್ಲಿ ತೇರ್ಗಡೆ ಅಥವಾ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಅಥವಾ ತತ್ಸಮನ ವಿದ್ಯಾರ್ಹತೆಯನ್ನು ಹೊಂದಿರಬೇಕು. ಅಭ್ಯರ್ಥಿಗಳು ಕಂಪ್ಯೂಟರ್‌ನಲ್ಲಿ ಬೆರಳಚ್ಚು ಮಾಡುವ ಜ್ಞಾನವನ್ನು ಹೊಂದಿರಬೇಕು.

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಕನಿಷ್ಠ 18 ವರ್ಷ ವಯೋಮಿತಿ ಹೊಂದಿರಬೇಕು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಹಾಗೂ ಪ್ರವರ್ಗ –1 ರ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿ 40 ವರ್ಷ ಪ್ರವರ್ಗ 2–ಎ, 2–ಬಿ, 3–ಎ ಮತ್ತು 3–ಬಿ ಗಳಿಗೆ ಸೇರಿದ ಅಭ್ಯರ್ಥಿಗಳಿಗೆ 38 ವರ್ಷ ಹಾಗೂ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ 35 ವರ್ಷ. ಹೆಚ್ಚಿನ ಮಾಹಿತಿಯನ್ನು https://districts.ecourts.gov.in/vijayapur-onlinerecruitment ವೆಬ್‌ಸೈಟ್‌ಗೆ ಭೇಟಿ ನೀಡಿ ಪಡೆಯಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಸಚಿವರ ಪ್ರವಾಸ

**ಬೆಂಗಳೂರು, ನವೆಂಬರ್ 17 (ಕರ್ನಾಟಕ ವಾರ್ತೆ) :**

ಮಾನ್ಯ ನಗರಾಭಿವೃದ್ಧಿ ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವ ಬಿ.ಎ. ಬಸವರಾಜು (ಬೈರತಿ) ಅವರು ನವೆಂಬರ್ 17 ರಿಂದ 19ವರೆಗೆ ತುಮಕೂರು, ಚಿತ್ರದುರ್ಗ ಹಾಗೂ ದಾವಣಗೆರೆ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ನವೆಂಬರ್ 19ರಂದು ಕೇಂದ್ರಸ್ಥಾನಕ್ಕೆ ಹಿಂದಿರುಗುವರೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಮನೆಯಂಗಳದಲ್ಲಿ ಮಾತುಕತೆ 217ನೇ ಸಂಚಿಕೆ ಕಾರ್ಯಕ್ರಮ

**ಬೆಂಗಳೂರು, ನವೆಂಬರ್ 17 (ಕರ್ನಾಟಕ ವಾರ್ತೆ) :**

ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯವು "ಮನೆಯಂಗಳದಲ್ಲಿ ಮಾತುಕತೆ" ಎಂಬ ವೈಶಿಷ್ಟಪೂರ್ಣ ಕಾರ್ಯಕ್ರಮವನ್ನು ನವೆಂಬರ್ 20 ರಂದು ಶನಿವಾರ ಸಂಜೆ 4 ಗಂಟೆಗೆ ಕನ್ನಡ ಭವನದ ನಯನ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ.

ಕಾರ್ಯಕ್ರಮದ ತಿಂಗಳ ಅತಿಥಿಗಳಾಗಿ ಪದ್ಮಶ್ರೀ ಪುರಸ್ಕೃತ ಹಾಗೂ ಸಮಾಜ ಸೇವಕರಾದ ಹರೇಕಾಳ ಹಾಜಬ್ಬ ಅವರು ಆಗಮಿಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಟಿಕೇಟ್ ಪಡೆಯದೇ ಅನಧಿಕೃತವಾಗಿ ಪ್ರಯಾಣ ಮಾಡುವವರಿಂದ ದಂಡ ವಸೂಲಿ

**ಬೆಂಗಳೂರು, ನವೆಂಬರ್ 17 (ಕರ್ನಾಟಕ ವಾರ್ತೆ) :**

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವಾಹನಗಳಲ್ಲಿ ಸಂಚರಿಸುವ ಪ್ರಯಾಣಿಕರು ಟಿಕೇಟನ್ನು ಪಡೆಯದೆ ಅನಧಿಕೃತವಾಗಿ ಪ್ರಯಾಣ ಮಾಡುವವರನ್ನು ಮತ್ತು ಸಂಸ್ಥೆಯ ಸಾರಿಗೆ ಆದಾಯದ ಸೋರಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ, ನಗರದಾದ್ಯಂತ ಸಂಚರಿಸುವ ವಾಹನಗಳನ್ನು ನಮ್ಮ ಸಂಸ್ಥೆಯ ತನಿಖಾ ತಂಡಗಳು **ಅಕ್ಟೋಬರ್–2021** ರ ಮಾಹೆಯಲ್ಲಿ ಒಟ್ಟು **14,233** ಟ್ರಿಪ್‌ಗಳನ್ನು ತಪಾಸಿಸಿ **2031** ಟಿಕೇಟ್ ರಹಿತ ಪ್ರಯಾಣಿಕರನ್ನು ಪತ್ತೆ ಹಚ್ಚಿ, ಅವರಿಂದ ಒಟ್ಟು ರೂ. **3,39,100/–** ದಂಡ ವಸೂಲಿ ಮಾಡಿ ಸಂಸ್ಥೆಯ ನಿರ್ವಾಹಕರ ವಿರುದ್ಧ **1295** ಪ್ರಕರಣಗಳನ್ನು ದಾಖಲಿಸಿರುತ್ತಾರೆ.

ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಕುಳಿತು ಪ್ರಯಾಣಿಸಿರುವ **172** ಪುರುಷ ಪ್ರಯಾಣಿಕರಿಂದ ಒಟ್ಟು ರೂ. **1,72,00/–**ನ್ನು ಮೋಟಾರು ವಾಹನ ಕಾಯ್ದೆ 1988ರ ಕಾಲಂ 177 ಮತ್ತು 94 ರ ಪ್ರಕಾರ ದಂಡ ವಿಧಿಸಲಾಗಿರುತ್ತದೆ.

ಒಟ್ಟಾರೆಯಾಗಿ **ಅಕ್ಟೋಬರ್–2021** ರ ಮಾಹೆಯಲ್ಲಿ **2203** ಪ್ರಯಾಣಿಕರಿಂದ ಒಟ್ಟು ರೂ **3,56,300/–** ದಂಡವನ್ನು ವಸೂಲಿ ಮಾಡಲಾಗಿದೆ.

ಪ್ರಯಾಣಿಕರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಾಗ ಅಧಿಕೃತ ಟಿಕೇಟ್ / ದಿನದ ಪಾಸು / ಮಾಸಿಕ ಪಾಸುಗಳನ್ನು ಹೊಂದಿ ಪ್ರಯಾಣಿಸುವುದು. ಇದರಿಂದ ಅನಗತ್ಯ ದಂಡ ಕಟ್ಟುವುದನ್ನು ತಡೆಯಬಹುದಾಗಿದೆ ಹಾಗೂ ಇಂತಹ ಪ್ರವೃತ್ತಿಯಿಂದ ಸಂಸ್ಥೆಯು ಉತ್ತಮ ಸೇವೆಯನ್ನು ಪ್ರಯಾಣಿಕರಿಗೆ ನೀಡಲು ಸಹಾಯವಾಗುತ್ತದೆ. ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಪುರುಷ ಪ್ರಯಾಣಿಕರು ಆಸನಗಳನ್ನು ತೆರವು ಮಾಡಿಕೊಡುವ ಮೂಲಕ ಅವರಿಗೆ ಕುಳಿತುಕೊಳ್ಳಲು ಅವಕಾಶ ನೀಡಬೇಕೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ಜಲಮಂಡಳಿಯ ವಿವಿಧ ಉಪವಿಭಾಗಗಳಲ್ಲಿ ನೀರಿನ ಅದಾಲತ್

**ಬೆಂಗಳೂರು, ನವೆಂಬರ್ 17 (ಕರ್ನಾಟಕ ವಾರ್ತೆ) :**

ಬೆಂಗಳೂರು ಜಲಮಂಡಳಿಯು ನವೆಂಬರ್ 18 ಗುರುವಾರದಂದು **(ಆಗ್ನೇಯ–6), (ಪೂರ್ವ–2)–2, (ಪೂರ್ವವಿಲೇಜ್)–2, (ದಕ್ಷಿಣವಿಲೇಜ್)–1, (ಪಶ್ಚಿಮ–3), (ನೈರುತ್ಯ–3), (ಆಗ್ನೇಯ–3), (ವಾಯುವ್ಯ–6), (ಕೇಂದ್ರ–3) (ವಾಯುವ್ಯ–2), (ಉತ್ತರ–3) ಮತ್ತು (ಈಶಾನ್ಯ–2)** ಉಪವಿಭಾಗಗಳಲ್ಲಿ ನೀರಿನ ಬಿಲ್ಲು, ನೀರು ಮತ್ತು ಒಳಚರಂಡಿ ಸಂಪರ್ಕ ಕಲ್ಪಿಸುವಲ್ಲಿನ ವಿಳಂಬ, ಗೃಹ ಬಳಕೆಯಿಂದ ಗೃಹೇತರ ಬಳಕೆ ಪರಿವರ್ತನೆ ವಿಳಂಬ ಮತ್ತಿತರ ಕುಂದುಕೊರತೆಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಪರಿಹರಿಸಲು ನೀರಿನ ಅದಾಲತ್‌ಅನ್ನು ಬೆಳಿಗ್ಗೆ 9.30 ರಿಂದ 11:00 ಗಂಟೆಯವರೆಗೆ ಏರ್ಪಡಿಸಲಾಗಿದೆ.

ಕುಂದು ಕೊರತೆಗಳಿಗೆ ಸಂಬಂಧಿಸಿದಂತೆ ಮಂಡಲಿಯ 24/7 ದೂರು ನಿರ್ವಹಣಾ ಕೇಂದ್ರದ ಸಹಾಯವಾಣಿ 1916 ಗೆ ಕರೆಮಾಡಿ ದೂರು ದಾಖಲಿಸಬಹುದು ಹಾಗೂ ವಾಟ್ಸ್‌ಆಪ್ ಸಂಖ್ಯೆ:8762228888 ಸಂದೇಶದ ಮೂಲಕ ದೂರನ್ನು ಸಲ್ಲಿಸಬಹುದಾಗಿದೆ.

ಸಾರ್ವಜನಿಕರು ಮೇಲಿನ ಸಮಸ್ಯೆಗಳನ್ನು ಬಗೆಹರಿಸಿಕೊಳ್ಳಲು ಈ ಅದಾಲತ್ ಸೌಲಭ್ಯವನ್ನು ಬಳಸಿಕೊಳ್ಳಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅಬಕಾರಿ ಸಚಿವರ ಪ್ರವಾಸ

**ಬೆಂಗಳೂರು, ನವೆಂಬರ್ 17 (ಕರ್ನಾಟಕ ವಾರ್ತೆ) :**

ಅಬಕಾರಿ ಸಚಿವರು ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಗೋಪಾಲಯ್ಯ ಅವರು ನವೆಂಬರ್ 18 ರಂದು ದಾವಣಗೆರೆ ಹಾಗೂ ಚಿತ್ರದುರ್ಗ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಆಗಮಿಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಗೌರವಾನ್ವಿತ ಉಪರಾಷ್ಟ್ರಪತಿಗಳಿಗೆ ಆತ್ಮೀಯ ಬೀಳ್ಕೊಡುಗೆ

**ಬೆಂಗಳೂರು, ನವೆಂಬರ್ 17 (ಕರ್ನಾಟಕ ವಾರ್ತೆ) :**

ಗೌರವಾನ್ವಿತ ಉಪರಾಷ್ಟ್ರಪತಿಗಳಾದ ಎಂ. ವೆಂಕಯ್ಯನಾಯ್ಡು ಅವರು 2021, ನವೆಂಬರ್ 14ರಿಂದ 17ರ ವರೆಗೆ ಬೆಂಗಳೂರಿನ ಪ್ರವಾಸ ಕೈಗೊಂಡು, ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಇಂದು ದಿನಾಂಕ: 17–11–2021ರಂದು ಬೇಗಂಪೇಟ್‌ಗೆ ಪ್ರಯಾಣ ಕೈಗೊಂಡರು. ಈ ಸಮಯದಲ್ಲಿ ರಾಜ್ಯದ ಗೌರವಾನ್ವಿತ ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಅವರು ಬೆಂಗಳೂರಿನ ಹೆಚ್.ಎ.ಎಲ್ ವಿಮಾನ ನಿಲ್ದಾಣದಲ್ಲಿ ಆತ್ಮೀಯವಾಗಿ ಬೀಳ್ಕೊಟ್ಟರು.

ಈ ಸಮಯದಲ್ಲಿ ನಗರಾಭಿವೃದ್ಧಿ ಸಚಿವ ಬಿ.ಎ. ಬಸವರಾಜು (ಬೈರತಿ), ಬೆಂಗಳೂರು ನಗರ ಜಿಲ್ಲಾಧಿಕಾರಿ ಮಂಜುನಾಥ್ ಸೇರಿದಂತೆ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಛಾಯಾಚಿತ್ರ ಲಗತ್ತಿಸಿದೆ.)**

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

**ಬೆಂಗಳೂರು, ನವೆಂಬರ್ 17 (ಕರ್ನಾಟಕ ವಾರ್ತೆ) :**

**ದಿನಾಂಕ: 17.11.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 56 | ತೃಪ್ತಿಕರ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 53 | ತೃಪ್ತಿಕರ | $PM_{2.5}$ |
| 3 | ಕವಿಕ, ಮೈಸೂರುರಸ್ತೆ | 74 | ತೃಪ್ತಿಕರ | CO |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೇಗೌಡನಗರ | 50 | ಉತ್ತಮ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 85 | ತೃಪ್ತಿಕರ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 65 | ತೃಪ್ತಿಕರ | CO |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, | 31 | ಉತ್ತಮ | $PM_{10}$ |
| **(17.11.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 50 | ಉತ್ತಮ | $NO_2$ |
| 9 | ಪೀಣ್ಯ | 64 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | 67 | ತೃಪ್ತಿಕರ | CO |

| ವರ್ಗ(ಶ್ರೇಣಿ) | ಉಂಟಾಗಬಹುದಾದ ಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕ ಒಡ್ಡುವಿಕೆಯಿಂದ ಜನರಿಗೆ ಶ್ವಾಸಕೋಶದ ಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತ ಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 17.11.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 56 | Satisfactory | $PM_{10}$ |
| 2 | Jayanagar 5th Block, Shalini ground | 53 | Satisfactory | $PM_{2.5}$ |
| 3 | KAVIKA, Mysore Road | 74 | Satisfactory | CO |
| 4 | Rajeev Gandhi Institute of Chest Disease, NIMHANS, Hombegowda Nagar | 50 | Good | CO |
| 5 | HSR Layout, near Central Silkboard | 85 | Satisfactory | CO |
| 6 | City Railway Station, Magestic, Bengaluru | 65 | Satisfactory | CO |
| 7 | Saneguruvanahalli, NisargaBhavan, KSPCB, Shivanagara | 31 | Good | $PM_{10}$ |
| **(17.11.2021 at 11.05 AM)** | | | | |
| 8 | BWSSB, Kadabesanahalli | 50 | Good | $NO_2$ |
| 9 | Peenya | 64 | Satisfactory | $PM_{2.5}$ |
| 10 | BTM Layout | 67 | Satisfactory | CO |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung,<br>Heart disease, children and older adults | Severe (>401) | Respiratory effects even on healthy people |